ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎ.ಸಿ.ಜೆ.ಎಂ. ನ್ಯಾಯಾಲಯ,
ಉಡುಪಿ.

ಸಿ.ಸಿ.:1095/2024
ಸಿ.ಡಬ್ಲ್ಯು 7 ಪಿ.ಡಬ್ಲ್ಯೂ : 6

| | |
|---|---|
| ಸಾಕ್ಷಿದಾರರ ಹೆಸರು | ಮಹಮ್ಮದ್ ಹುಸೇನ್ |
| ತಂದೆಯ ಹೆಸರು | ಅಸೇನ್ |
| ವಯಸ್ಸು | 60 ವರ್ಷ |
| ಉದ್ಯೋಗ | ರಿಕ್ಷಾ ಚಾಲಕ |
| ವಾಸಸ್ಥಳ | ನಿಟ್ಟೂರು |

ದಿನಾಂಕಃ 20-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ**

ಚಾಸಾ 1ರವರ ಪರಿಚಯ ಇರುವುದಿಲ್ಲ. ಸಾಕ್ಷಿಯವರು ಒಂದು ದಾಖಲೆಯನ್ನು ನೋಡಿ ಅದರಲ್ಲಿ ತಮ್ಮ ಸಹಿ ಇದೆ ಎಂದು ಗುರುತಿಸಿದ್ದು ಸದರಿ ದಾಖಲೆಯು ಅಮಾನತು ಪಂಚನಾಮೆಯಾಗಿದ್ದು ಅದನ್ನು ಈಗಾಗಲೇ ನಿಪಿ. 3 ಎಂದು ಗುರುತಿಸಲಾಗಿದ್ದು, ಸಾಕ್ಷಿಯವರ ಸಹಿಯನ್ನು ನಿಪಿ. 3 ಎ ಎಂದು ಗುರುತಿಸಲಾಯಿತು. ನಿಪಿ 3 ಕ್ಕೆ ಪೊಲೀಸಿನವರು ಕೋರಿದ ಮೇರೆಗೆ ಪೊಲೀಸ್ ಠಾಣೆ ಯಲ್ಲಿ ಸುಮಾರು 13 ವರುಷಗಳ ಹಿಂದೆ ಸಹಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಚಾಸಾ 1ರವರು ನನ್ನ ಸಮಕ್ಷಮದಲ್ಲಿ ಯಾವುದೇ ದಾಖಲೆಗಳನ್ನು ಹಾಜರು ಪಡಿಸಿರುವುದಿಲ್ಲ ಮತ್ತು ಪೊಲೀಸಿನವರು ಯಾವುದೇ ದಾಖಲೆಗಳನ್ನು ಜಪ್ತು ಮಾಡಿಕೊಂಡಿರುವುದಿಲ್ಲ. ನಿಪಿ 6 ರಿಂದ 9 ಎಂದು ಗುರುತಿಸಿರುವ ದಾಖಲೆಗಳನ್ನು ನಾನು ಈ ಹಿಂದೆ ನೋಡಿರುವುದಿಲ್ಲ

ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿ ಕೂಲ ಸಾಕ್ಷಿ ಎಂದು ತಿಳಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ ಅನುಮತಿಯನ್ನು ನೀಡಲಾಯಿತು.

**ಪಾಟೀ ಸವಾಲುಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ 29-08-2013 ರಂದು ಚಾಸಾ 1 ರವರು ನಿಪಿ 4 ರಿಂದ 9 ಎಂದು ಗುರುತಿಸಿರುವ ದಾಖಲೆಗಳನು ನಿಮ್ಮ ಹಾಜರಿಯಲ್ಲಿ ತನಿಖಾಧಿಕಾರಿಯವರ ಮುಂದೆ ಹಾಜರು ಪಡಿಸಿದ್ದು ತನಿಖಾಧಿಕಾರಿಯವರು ಮದ್ಯಾಹ್ನ 1.30 ರಿಂದ 2.30 ರವಗೆ ನಿಪಿ 3 ರಂತೆ ಅಮಾನತು ಪಂಚನಾಮೆಯನ್ನು ಜರುಗಿಸಿ ಜಪ್ತು ಮಾಡಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ 3 ರಲ್ಲಿ ಬರೆದಿರುವ ವಿಚಾರಗಳು ನಿಮಗೆ ತಿಳಿದಿದ್ದರೂ ಸಹ ಆರೋಪಿಯವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ. ನಿಪಿ 4 ರಿಂದ ನಿಪಿ 9 ಎಂದು ಗುರುತಿಸಿರುವ ದಾಖಲೆಗಳನ್ನು ನೋಡಿದ್ದರೂ ಸಹ ನೋಡಿಲ್ಲ ವೆಂದು ಸುಳ್ಳು ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿಯವರ ಪರ ಶ್ರೀ ಪಿ. ಕೆ. ಎಸ್ ವಕೀಲರಿಂದಃ**

ಪಾಟೀ ಸವಾಲು ಇಲ್ಲವೆಂದು ಮನವಿ ಮಾಡಿರುತ್ತಾರೆ.

ಮರು ವಿಚಾರಣೆಃ ಇಲ್ಲ.

(ತೆರದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ ಎಂದು ಒಪ್ಪಿದ್ದೇನೆ.

ಹೆ.ಹಿ.ಸಿ.ನ್ಯಾ ಮತ್ತು ಎಸಿಜೆಎಂ ಉಡುಪಿ.